# ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ರಾಮನಗರ ಹಾಗೂ ಹಾಸನ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಗಳ ಹಾಗೂ ಕಾರ್ಯಕ್ರಮ ಸಹಾಯಕರುಗಳ ವೇತನಕ್ಕಾಗಿ ಅನುದಾನ ಬಿಡುಗಡೆಗೊಳಿಸುವ ಬಗ್ಗೆ.

**ಓದಲಾಗಿದೆ:**

1. ಸರ್ಕಾರದ ಆದೇಶ ಸಂಖ್ಯೆ: ಆಇ 198 ಬಿ.ಆರ್.ಎಸ್ 2022 ಬೆಂಗಳೂರು ದಿನಾಂಕ:10.10.2022
2. ಆರ್ಥಿಕ ಇಲಾಖೆ ವೆಚ್ಚ 3 ಶಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ: ಆಇ 702 ವೆಚ್ಚ 8/2022

ರಾಮನಗರ ಹಾಗೂ ಹಾಸನ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಗಳ ಹಾಗೂ ಕಾರ್ಯಕ್ರಮ ಸಹಾಯಕರುಗಳ ವೇತನ ಪಾವತಿಗೆ ಅಗತ್ಯವಿದ್ದು ಅನುದಾನವನ್ನು ಮರುಹೊಂದಾಣಿಕೆ ಮೂಲಕ ಮೇಲೆ (1)ರಲ್ಲಿ ಓದಲಾದ ಆದೇಶದಲ್ಲಿ ಒದಗಿಸಲಾಗಿದ್ದು, ಸದರಿ ಅನುದಾನವನ್ನು ಸಂಬಂಧಪಟ್ಟ ಜಿಲ್ಲಾ ಪಂಚಾಯಿತಿಗಳಿಗೆ ಬಿಡುಗಡೆಗೊಳಿಸುವಂತೆ ಮೇಲೆ(2)ರಲ್ಲಿ ಓದಲಾದ ಅ.ಟಿಯಲ್ಲಿ ಪ್ರಸ್ತಾವಿಸಲಾಗಿದೆ.

ಪ್ರಸ್ತಾವನೆಯನ್ನು ಪರಿಶೀಲಿಸಿ ಅನುದಾನವನ್ನು ಬಿಡುಗಡೆಗೊಳಿಸುವ ಸಂಬಂಧ ಈ ಕೆಳಕಂಡಂತೆ ಆದೇಶಿಸಿದೆ.

## ಸರ್ಕಾರದ ಆದೇಶ ಸಂಖ್ಯೆ: ಆಇ 791 ವೆಚ್ಚ 6/2022 ಇ ದಿನಾಂಕ:27ನೇ ಅಕ್ಟೋಬರ್ 2022

ಪ್ರಸ್ತಾವನೆಯಲ್ಲಿ ವಿವರಿಸಿರುವಂತೆ ಈ ಕೆಳಕಂಡ ಕೋಷ್ಟಕದ ಕಾಲಂ 2ರ ಜಿಲ್ಲಾ ಪಂಚಾಯತಿಗೆ ಕಾಲಂ 3 ಕಾರ್ಯಕ್ರಮದಡಿ ಜಿಲ್ಲಾ ವಯಸ್ಕರ ಶಿಕ್ಷಣಾಧಿಕಾರಿಗಳ ಹಾಗೂ ಕಾರ್ಯಕ್ರಮ ಸಹಾಯಕರುಗಳ ವೇತನ ಪಾವತಿಗೆ ಅಗತ್ಯವಿರುವ ಅನುದಾನವನ್ನು ಕಾಲಂ 4ರ ಲೆಕ್ಕ ಶೀರ್ಷಿಕೆಯಡಿ ರೂ.27.66ಲಕ್ಷ (ರೂಪಾಯಿ ಇಪ್ಪತ್ತೇಳು ಲಕ್ಷದ ಅರವತ್ತಾರು ಸಾವಿರಗಳು ಮಾತ್ರ) ಗಳನ್ನು ಬಿಡುಗಡೆಗೊಳಿಸಿದೆ.

| ಕ್ರ.ಸಂ. | ಜಿಲ್ಲಾ/ತಾಲ್ಲೂಕು ಪಂಚಾಯತ್ | ಕಾರ್ಯಕ್ರಮದ ಲೆಕ್ಕ ಶೀರ್ಷಿಕೆ | ಬಿಡುಗಡೆಗೊಳಿಸಿದ ಲೆಕ್ಕ ಶೀರ್ಷಿಕೆ | ಬಿಡುಗಡೆಗೊಳಿಸಿದ ಮೊತ್ತ(ಲಕ್ಷಗಳಲ್ಲಿ) |
|---|---|---|---|---|
| (1) | (2) | (3) | (4) | (5) |
| 1 | ರಾಮನಗರ | 2202–00–103–0–36–005 | 2202–01–196–1–01–452 | 7.60 |
| 2 | ಹಾಸನ | 2202–00–103–0–36–005 | 2202–01–196–1–01–410 | 22.06 |
| | | | ಒಟ್ಟು | **29.66** |

(ಸೂಚನೆ:ಬಿಡುಗಡೆಗೊಳಿಸಿದ ಈ ಅನುದಾನವನ್ನು ಪ್ರಸ್ತಾವಿತ ವೆಚ್ಚವನ್ನು ಆದ್ಯತೆಯ ಮೇಲೆ ವೆಚ್ಚ ಮಾಡತಕ್ಕದ್ದು, ಯಾವುದೇ ಹಂತದಲ್ಲಿ ಅಂದರೆ ಮುಖ್ಯ ಲೆಕ್ಕಾಧಿಕಾರಿಳು/ಅನುಷ್ಠಾನಾಧಿಕಾರಿಗಳ ಹಂತದಲ್ಲಿ ವಿಳಂಬವಾಗಿ ಅನುದಾನ ವ್ಯಪಗತವಾದಲ್ಲಿ ಮತ್ತೊಮ್ಮೆ ಅನುದಾನವನ್ನು ಒದಗಿಸುವುದಿಲ್ಲವೆಂದು ಮತ್ತು ವಿಳಂಬಗೊಳಿಸಿದ ಅಧಿಕಾರಿಗಳ ವಿರುದ್ಧ ನಿಯಮಾನುಸಾರ ಕ್ರಮವಹಿಸಲಾಗುವುದು.ಪ್ರಸ್ತಾವಿತ ಲೆಕ್ಕ ಶೀರ್ಷಿಕೆಯಡಿ ಬಾಕಿ ವೇತನವನ್ನು ಸೆಳೆಯಬೇಕಾಗಿದ್ದಲ್ಲಿ ಅದಕ್ಕೆ ಆರ್ಥಿಕ ಇಲಾಖೆ ಹೊರಡಿಸಿರುವ ಸುತ್ತೋಲೆಯ ಷರತನ್ನು ಸಡಿಲಿಸಿ ಬಾಕಿ ವೇತನವನ್ನು ಸೆಳೆಯಲು ಸಹಮತಿಸಿದೆ ಎಂದು ಭಾವಿಸತಕ್ಕದ್ದು.)

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ ಮತ್ತು ಅವರ ಹೆಸರಿನಲ್ಲಿ

(ಶ್ರೀಕೃಷ್ಣ ಎನ್.ಬುಗಟ್ಯಾಗೋಳ)

ವಿಶೇಷಾಧಿಕಾರಿ(ಜಿ.ಪಂ.) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಆರ್ಥಿಕ ಇಲಾಖೆ

1. ಮಹಾಲೇಖಪಾಲರು(ಎ&ಇ), ಲೆಕ್ಕ ಪರಿಶೋಧನೆ 1 & 2, ಕರ್ನಾಟಕ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಶಿಕ್ಷಣ ಇಲಾಖೆ.
3. ಆಯುಕ್ತರು, ಖಜಾನೆ ಆಯುಕ್ತಾಲಯ, 5 & 6ನೇ ಮಹಡಿ, ಕೆಪಿಟಿಸಿಎಲ್ ಹಸಿರು ಕಟ್ಟಡ, ಅರಮನೆ ರಸ್ತೆ, ಬೆಂಗಳೂರು.
4. ಸಂಬಂದ ಪಟ್ಟ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು/ಮುಖ್ಯ ಲೆಕ್ಕಾಧಿಕಾರಿಗಳು, ಜಿಲ್ಲಾ ಪಂಚಾಯತ್.
5. ಸಂಬಂದ ಪಟ್ಟ ಜಿಲ್ಲಾ ಖಜಾನಾಧಿಕಾರಿಗಳು.
6. ಶಾಖಾಧಿಕಾರಿ, ಆರ್ಥಿಕ ಇಲಾಖೆ (ವೆಚ್ಚ 8)ರವರ ಕಡತಕ್ಕೆ.
7. ರಕ್ಷಾ ಕಡತಕ್ಕೆ/ ಹೆಚ್ಚುವರಿ ಪ್ರತಿ.